1957ರ ಕರ್ನಾಟಕ ಕೃಷಿ ವರಮಾನ ತೆರಿಗೆ ಕಾಯ್ದೆ 612(1)(2)ರ ಪ್ರಕರಣದ ಮೇರೆಗೆ:

14) ತೋಟದ ಬೆಳೆ ಮತ್ತು 50 ಎಕರೆಗಿಂತ ಕಡಿಮೆ ಜಮೀನು ಹೊಂದಿರುವ ಎಲ್ಲಾ ತೆರಿಗೆದಾರರು ಕರ್ನಾಟಕ ಕೃಷಿ ವರಮಾನ ತೆರಿಗೆಯನ್ನು 2004–05ನೇ ಅವಧಿಗೆ ಮತ್ತು ಸಂಬಂಧಪಟ್ಟ 2005–06 ಕರ ನಿರ್ಧಾರಣಾ ವರ್ಷಕ್ಕೆ ಪಾವತಿಸಬೇಕಾದ ತೆರಿಗೆಯನ್ನು ಮನ್ನಾ ಮಾಡುವ ಬಗ್ಗೆ ದಿನಾಂಕ 16–09–2005ರಂದು ಹೊರಡಿಸಲಾದ ಎಫ್‌ಡಿ 416 ಸಿಎಸ್‌ಎಲ್ 2005(3)ನೇ ಸಂಖ್ಯೆಯ ಅಧಿಸೂಚನೆ.

1959ರ ಕರ್ನಾಟಕ ಮನರಂಜನಾ ತೆರಿಗೆ ಕಾಯ್ದೆ 18ರ ಪ್ರಕರಣದ ಮೇರೆಗೆ:

15) 1959ರ ಕರ್ನಾಟಕ ಮನರಂಜನಾ ತೆರಿಗೆ ನಿಯಮಗಳಿಗೆ ನಿಯಮ 17–ಬಿ ಯನ್ನು ಹೊಸದಾಗಿ ಸೇರ್ಪಡಿಸಿ ದಿನಾಂಕ 27–09–2005ರಂದು ಹೊರಡಿಸಲಾದ ಎಫ್‌ಡಿ 20 ಸಿಇಎಕ್ಸ್ 2005ನೇ ಸಂಖ್ಯೆಯ ಅಧಿಸೂಚನೆ.

1979ರ ಕರ್ನಾಟಕ ಪ್ರವೇಶ ತೆರಿಗೆ ಕಾಯ್ದೆ ಕಲಂ 31ರ ಪ್ರಕರಣದ ಮೇರೆಗೆ:

16) ವಿದೇಶಿ ರಾಯಭಾರಿ ಧೂತ ವರ್ಗದವರು ತರುವ ವಾಹನಗಳಿಗೆ ಅಥವಾ ವರ್ತಕರು ವಿದೇಶಿ ರಾಯಭಾರಿ ವರ್ಗದವರಿಗೆ ಅಥವಾ ಸದಸ್ಯರಿಗೆ ಅವರ ಅಧಿಕೃತ ಉಪಯೋಗಕ್ಕಾಗಿ ಮಾರಾಟ ಮಾಡುವ ವಾಹನಗಳಿಗೆ ದಿನಾಂಕ 01.10.2003 ರಿಂದ 31.10.2003 ರವರೆಗೆ ಜಾರಿಗೆ ಬರುವಂತೆ ಘೋಷಣಾ ಪತ್ರವನ್ನು ಸಲ್ಲಿಸುವ ಷರತ್ತಿನ ಮೇಲೆ ಪ್ರವೇಶ ತೆರಿಗೆಯಿಂದ ವಿನಾಯಿತಿ ನೀಡಿ ದಿನಾಂಕ 29.10.2005 ರಂದು ಹೊರಡಿಸಲಾದ ಎಫ್‌ಡಿ 72 ಸಿಇಟಿ 2003ನೇ ಸಂಖ್ಯೆಯ ಅಧಿಸೂಚನೆ.

1957ರ ಕರ್ನಾಟಕ ಮಾರಾಟ ತೆರಿಗೆ ಕಾಯ್ದೆ ಕಲಂ 39ರ ಪ್ರಕರಣದ ಮೇರೆಗೆ:

17) ಕ್ಯಾಪಿಟೀವ್ ಜನರೇಷನ್ ಸೆಟ್‌ಗಳಿಗೆ ಸಂಬಂಧಿಸಿದಂತೆ ರಾಜ್ಯದಲ್ಲಿ ಗುರುತಿಸಲ್ಪಟ್ಟ ಕೆಲವು ಕೈಗಾರಿಕಾ ಭಾಗಗಳಿಗೆ (ತಯಾರಿಕಾ ಅಥವಾ ಸಂಸ್ಕರಣೆಗೆ ತೊಡಗಿರುವುದಕ್ಕೆ ಸಂಬಂಧಿಸಿದಂತೆ) ಮಾರಾಟ ಮಾಡುವ ಡೀಸಲ್ ಮೇಲೆ ವರ್ತಕರು ಪಾವತಿಸಬೇಕಾದ ಮಾರಾಟ ತೆರಿಗೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಶೇಕಡ 4ಕ್ಕೆ ಕಡಿಮೆಗೊಳಿಸಿ ಸಂಬಂಧಪಟ್ಟ ಪ್ರಾಧಿಕಾರದವರು ಘೋಷಣಾ ಪತ್ರವನ್ನು ಸಲ್ಲಿಸುವ ಷರತ್ತಿನ ಮೇಲೆ ದಿನಾಂಕ 11.11.2005 ರಂದು ಹೊರಡಿಸಲಾದ ಎಫ್‌ಡಿ 360 ಸಿಎಸ್‌ಎಲ್ 2005ನೇ ಸಂಖ್ಯೆಯ ಅಧಿಸೂಚನೆ.

1978ರ ಕರ್ನಾಟಕ ನಾಗರೀಕ ಸೇವಾ ಅಧಿನಿಯಮ 8(3)ರ ಪ್ರಕರಣದ ಮೇರೆಗೆ:

18) ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 171ಕ್ಕೆ ತಿದ್ದುಪಡಿ ಮಾಡಿ ದಿನಾಂಕ 22.12.2005 ರಂದು ಹೊರಡಿಸಲಾದ ಎಫ್‌ಡಿ 9 ಎಸ್‌ಆರ್‌ಎ 2004ನೇ ಸಂಖ್ಯೆಯ ಅಧಿಸೂಚನೆಗಳನ್ನು ಮಂಡಿಸುತ್ತೇನೆ.

II 1951ರ ರಾಜ್ಯ ಹಣಕಾಸು ಸಂಸ್ಥೆ ಕಾಯ್ದೆ ಕಲಂ 37(7) ಮತ್ತು 38(3)ರ ಮೇರೆಗೆ:

1. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ 2003–04ನೇ ಸಾಲಿನ ಲೆಕ್ಕಪರಿಶೋಧನಾ ವರದಿ.
2. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ 2004–05ನೇ ಸಾಲಿನ ವಾರ್ಷಿಕ ವರದಿ.

1956ರ ಕರ್ನಾಟಕ ಖಾದಿ ಮತ್ತು ಗ್ರಾಮೋದ್ಯೋಗ ಕಾಯಿದೆಯ 5(26)ರ ಮೇರೆಗೆ:

1. ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ 2003–04ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಅಧಿನಿಯಮ 1966ರ ಪ್ರಕರಣ 28(4)ರ ಮೇರೆಗೆ:

1. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ 2003–04ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ:

1. ಕರ್ನಾಟಕ ಸಣ್ಣ ಕೈಗಾರಿಕೆಗಳ ಮಾರುಕಟ್ಟೆ ನಿಗಮ ನಿಯಮಿತದ 2002–03ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
2. ದಿ ಮೈಸೂರು ಲ್ಯಾಂಪ್ ವರ್ಕ್ಸ್ ನಿಯಮಿತದ 2002–03 ಹಾಗೂ 2003–04ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿ.
3. ಮೈಸೂರು ಪೆಯಿಂಟ್ಸ್ ಮತ್ತು ವಾರ್ನಿಷ್ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
4. ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
5. ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
6. ದಿ ಮೈಸೂರು ಕ್ರೋಮ್‌ಟ್ಯಾನಿಂಗ್ ಕಂಪನಿ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
7. ದಿ ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಸ್ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
8. ದಿ ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
9. ಮೈಸೂರು ಮಿನರಲ್ಸ್ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತೇನೆ.

III. ಶ್ರೀ ಬಸವರಾಜ ಎಸ್. ಹೊರಟ್ಟಿ(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) ಅವರು: 1978ರ ಕರ್ನಾಟಕ ಶಿಕ್ಷಣ ಅಧಿನಿಯಮ (1991ರ ಕರ್ನಾಟಕ ಅಧಿನಿಯಮ 1) 145 (4)ರ ಪ್ರಕರಣದ ಮೇರೆಗೆ:

1) 1999ರ ಕರ್ನಾಟಕ ಶಿಕ್ಷಣ ಸಂಸ್ಥೆಗಳ (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ಸೇವಾ ಷರತ್ತು ಮತ್ತು ನಿಬಂಧನೆಗಳು) ನಿಯಮಾವಳಿಯ ಅನುಸೂಚಿ 4ಕ್ಕೆ ತಿದ್ದುಪಡಿ ಮಾಡಿ ದಿನಾಂಕ 12.08.2005 ರಂದು ಹೊರಡಿಸಲಾದ ಇಡಿ 94 ಎಸ್‌ಇಪಿ 2005ನೇ ಸಂಖ್ಯೆಯ ಅಧಿಸೂಚನೆ.

2) 1997ರ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ವರ್ಗೀಕರಣ ಮತ್ತು ನೋಂದಣಿ) ನಿಯಮಗಳ